ಆನೆಗೊಂದಿ ಉತ್ಸವ ಜನೋತ್ಸವವಾಗಿದೆ: ನಲಿನ್ ಅತುಲ್

ಕೊಪ್ಪಳ ಮಾರ್ಚ್: ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಮೂಲಕ ಆನೆಗೊಂದಿ ಉತ್ಸವವು ಜನೋತ್ಸವವಾಗಿ ಯಶ ಕಂಡಿದೆ ಎಂದು ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಹೇಳಿದರು. ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಆನೆಗೊಂದಿ ಉತ್ಸವಕ್ಕೆ ಮಾರ್ಚ 11ರಂದು ಚಾಲನೆ ನೀಡಲಾಯಿತು. ಆದರೆ, ಉತ್ಸವದ ಹಿನ್ನೆಲೆಯಲ್ಲಿ ಕ್ರೀಡಾ ಇಲಾಖೆಯಿಂದ ಕ್ರೀಡಾಕೂಟಗಳು, ರಂಗೋಲಿ ಸೇರಿದಂತೆ ಬೇರೆ ಬೇರೆ ಸ್ಪರ್ಧೆಗಳು ಮಾರ್ಚ 8ರಿಂದಲೇ ನಡೆದಿವೆ. ಉದ್ಘಾಟನಾ ಸಮಾರಂಭವು ಅದ್ದೂರಿಯಾಗಿ ನಡೆದಿದೆ. ಎರಡು ವೇದಿಕೆಯಲ್ಲಿ ಬೇರೆ ಬೇರೆ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆದಿವೆ. ಹೀಗಾಗಿ ಐತಿಹಾಸಿಕ ಆನೆಗೊಂದಿ ಉತ್ಸವವು ಪೂರ್ಣ ಪ್ರಮಾಣದಲ್ಲಿ ಯಶಸ್ವಿಯಾಗಿದೆ ಎಂದು ಹೇಳಲು ಸಂತಸ ಅನಿಸುತ್ತದೆ ಎಂದು ತಿಳಿಸಿದರು.

ಉತ್ಸವಕ್ಕೆ ನಗದಿಯಾದ ದಿನದಿಂದಲು ನಾವು ಆನೆಗೊಂದಿ ಮತ್ತು ಅಂಜನಾದ್ರಿಯ ಬಗ್ಗೆ ಮಾತನಾಡುತ್ತಿದ್ದೇವೆ. ಈ ಪ್ರದೇಶದ ಇತಿಹಾಸ ಎಲ್ಲರಿಗೂ ತಿಳಿದಿದೆ. ಇಲ್ಲಿನ ವಿಶೇಷ ಇತಿಹಾಸದ ಮಾಹಿತಿಯನ್ನು ವಿದ್ಯಾರ್ಥಿ ಯುವಜನರಿಗೆ ಮತ್ತೆ ಮತ್ತೆ ತಿಳಿಸಬೇಕು. ನಾಡು ನುಡಿ ಇತಿಹಾಸದ ಬಗ್ಗೆ ಜಾಗೃತಿ ಮೂಡಿಸುವ ನಟ್ಟಿನಲ್ಲಿ ಯೋಜಿಸಿ ರೂಪಿಸಿದ ಕಾರ್ಯಕ್ರಮ ಈ ಉತ್ಸವ ಆಗಿದೆ ಎಂದರು.

ಈ ಉತ್ಸವಕ್ಕೆ ದಿನಾಂಕ ನಗದಿಯಾದಾಗ ಸಿದ್ಧತೆ ಮಾಡಲು ಸಮಯದ ಅವಕಾಶ ಕಡಿಮೆ ಇತ್ತು. ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಮತ್ತು ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಅಧಿಕಾರಿಗಳ ಸಭೆ ನಡೆಸಿ ಚಾಲನೆ ನೀಡಿದರು. ಬಳಿಕ ಸಮಿತಿಗಳನ್ನು ರಚಿಸಿ ನಾನಾ ಕಾರ್ಯ ಮಾಡಿದ್ದರಿಂದ ಉತ್ಸವ ನಡೆಯಿತು. ಹೀಗಾಗಿ ಸಚಿವರು ಮತ್ತು ಶಾಸಕರಿಗೆ ಅಭಿನಂದನೆ ತಿಳಿಸುವೆ ಎಂದರು.ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಬಯಸುವಂತೆ ಅಂಜನಾದ್ರಿಯ ಸಮಗ್ರ ಅಭಿವೃದ್ಧಿಯ ಕಾರ್ಯಗಳು ನಿರಂತರವಾಗಿ ನಡೆಸಲು ಪ್ರವಾಸೋದ್ಯಮ ಇಲಾಖೆಯೊಂದಿಗೆ ಜಿಲ್ಲಾಡಳಿತವು ನಿರಂತರ ಕಾರ್ಯ ಮಾಡುತ್ತಿದೆ. ಅಂಜನಾದ್ರಿಯ ಸಮಗ್ರ ಅಭಿವೃದ್ಧಿಗಾಗಿ ಈಗಾಗಲೇ ರಾಜ್ಯ ಸರ್ಕಾರದಿಂದ 100 ಕೋಟಿ ರೂ.ಗಳ ಬಿಡುಗಡೆಗೆ ಆಡಳಿತಾತ್ಮಕ

ಅನುಮೋದನೆ ಸಿಕ್ಕಿದೆ. ಅಂಜನಾದ್ರಿ ಬೆಟ್ಟದ ಸಮಗ್ರ ಅಭಿವೃದ್ಧಿ ಯೋಜನೆಯಡಿ ಕಾಮಗಾರಿಗಳನ್ನು 100 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕರ್ನಾಟಕ ಪ್ರವಾಸೋದ್ಯಮ ಮೂಲಸೌಕರ್ಯ ನಿಗಮ ಬೆಂಗಳೂರ ಇವರ ಮೂಲಕ ಅನುಷ್ಠಾನ ಗೊಳಿಸಲು ಸರ್ಕಾರವು 2022ರಲ್ಲಿ ಅನುಮೋದನೆ ನೀಡಿದೆ. ಕೆಟಿಐಎಲ್ ಸಂಸ್ಥೆಯಿಂದ ಟೆಂಡರ್ ಕರೆದು ಗುತ್ತಿಗೆದಾರರಿಗೆ ಕಾಮುಗಾರಿಗಳ ವಹಿಸಲಾಗಿದೆ. ಇದರಡಿ 9.98 ಕೋಟಿ ರೂ. ವೆಚ್ಚದಲ್ಲಿ ಪ್ರವಾಸಿ ಮಂದಿರ ನಿರ್ಮಾಣ ಕಾಮಗಾರಿ, 4.32 ಕೋಟಿ ರೂ. ವೆಚ್ಚದಲ್ಲಿ ಪ್ರದಕ್ಷಣ ಪಥ ನೆಲಹಾಸು ನಿರ್ಮಾಣ ಕಾಮಗಾರಿ, 7.24 ಕೋಟಿ ರೂ. ವೆಚ್ಚದಲ್ಲಿ ಶ್ಯಾಪಿಂಗ್ ಕಾಂಪ್ಲೆಕ್ಸ್ ಮತ್ತು ಶೌಚಾಲಯ ನಿರ್ಮಾಣ ಕಾಮಗಾರಿ ಸೇರಿ ಅಂದಾಜು 21.57 ಕೋಟಿ ರೂ.ಗಳ ವೆಚ್ಚದಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಸ್ವದೇಶ್ ದರ್ಶನ್ 2.0 ಯೋಜನೆಯಡಿ ಅನುಮೋದನೆಗೊಂಡಿರುವ ಹಂಪಿ ಯೋಜನೆಯ ಕಾಮುಗಾಯಡಿ ಅಂಜನಾದ್ರಿ ಬೆಟ್ಟದ ಪಾರ್ಕಿಂಗ್ ಪ್ರದೇಶದಲ್ಲಿ ಸಹ ವಿವಿಧೆಡೆ ನಾನಾ ಕಾಮಗಾರಿಗಳನ್ನು 1.06 ಕೋಟಿ ರೂ.ಗಳ ವೆಚ್ಚದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ಅದೇ ರೀತಿ ಆನೆಗೊಂದಿಯ ಗಗನ್ ಮಹಲ್ ಹತ್ತಿರದಲ್ಲಿ ಸಹ ವಿವಿಧ ಕಾಮಗಾರಿಗಳನ್ನು 46 ಲಕ್ಷ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಇತ್ತೀಚೆಗೆ ನಾವು ಬ್ರಾ?ಯಂಡ್ ಕೊಪ್ಪಳ ಲೋಗೊ ಅನಾವರಣ ಮಾಡಿದ್ದೇವೆ. ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ಕೊಡಬೇಕು ಎಂಬುದು ನಮ್ಮ ಆಶಯವಾಗಿದೆ. ಈ ಭಾಗದಲ್ಲಿ ಅನೇಕ ಪ್ರಾಚೀನ ಸ್ಥಳಗಳಿವೆ. ಕೊಪ್ಪಳ ಜಿಲ್ಲೆಯಲ್ಲಿ ಇಂತಹ ಪ್ರದೇಶಗಳಿವೆ ಬಂದು ನೋಡಿರಿ ಎನ್ನುವ ಸಂದೇಶವನ್ನು ಜಾಗತಿಕವಾಗಿ ರವಾನೆ ಮಾಡಲು ಯೋಜಿಸಿ ಈ ಬ್ರಾ?ಯಂಡ್ ಕೊಪ್ಪಳ ಲೋಗೊ ವನ್ನು ಅನಾವರಣಗೊಳಿಸಿದ್ದೇವೆ ಎಂದು ತಿಳಿಸಿದರು. ಕೊಪ್ಪಳ ಜಿಲ್ಲೆಯು ಟೂರಿಸಂ ಹಬ್ ಆಗಿದೆ. ನಾವು ವಿಶೇಷವಾಗಿ ಆನೆಗೊಂದಿ ಭಾಗದಲ್ಲಿ ಇರುವ ಐತಿಹಾಸಿಕ ಸ್ಥಳಗಳ ಮಾಹಿತಿಯ ಒಂದು ವಿಡಿಯೋ ನಿರ್ಮಾಣ ಮಾಡಿದ್ದೇವೆ. ಈ ವಿಡಿಯೋ ವೀಕ್ಷಣೆ ಮಾಡಿದಲ್ಲಿ ಈ ಭಾಗದ ಎಲ್ಲ ಪ್ರವಾಸಿ ಸ್ಥಳಗಳ ಮಾಹಿತಿಯು ಗೊತ್ತಾಗುತ್ತದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ವಿಶೇಷ ಆಸಕ್ತಿ ವಹಿಸಿ ಈ ಆನೆಗೊಂದಿ ಉತ್ಸವದಲ್ಲಿ ಐತಿಹಾಸಿಕ ವಿಡಿಯೋ ಚಿತ್ರೀಕರಣವನ್ನು ಬಿಡುಗಡೆ ಮಾಡಿದೆ ಎಂದರು.

ಇದು ಹೊಸ ಹೊಸ ಟೆಕ್ನಾಲಜಿಯ ಯುಗ. ಸೋಷಿಯಲ್ ಮೀಡಿಯಾ ವೇಗವಾಗಿ ಬೆಳೆಯುತ್ತಿದೆ. ಫೇಸ್‌ಬುಕ್, ಇನಸ್ಟಾಗ್ರಾಮಂ, ಎಕ್ಸ್ ಟ್ವೀಟರ್ ಖಾತೆ ಬಳಕೆ ಮಾಡುವವರ ಸಂಖ್ಯೆ ದೊಡ್ಡದಿದೆ. ಐತಿಹಾಸಿಕ ಸ್ಥಳಗಳನ್ನು ಹೊಂದಿದ ಕೊಪ್ಪಳ ಜಿಲ್ಲೆಯನ್ನು ಟೂರಿಸಂ ಬ್ರಾ?ಯಂಡ್ ಮಾಡಬೇಕು ಎಂಬುದು ನಮ್ಮ ವಿಶಿಷ್ಟ ಯೋಜನೆಯಾಗಿದೆ. ಕನಕಗಿರಿ ಉತ್ಸವದಲ್ಲಿ ಬಿಡುಗಡೆ ಮಾಡಿದ ಕೊಪ್ಪಳ ಬ್ರಾ?ಯಂಡ್ ಮತ್ತು ಆನೆಗೊಂದಿ ಉತ್ಸವದಲ್ಲಿ ಬಿಡುಗಡೆ ಮಾಡಿದ ವಿಡಿಯೋವನ್ನು ಜಿಲ್ಲೆಯ ಪ್ರತಿಯೊಬ್ಬರು ತಮ್ಮ ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಶೇರ್ ಮಾಡಬೇಕು. ವಿಡಿಯೋ ಲಿಂಕ್‌ನ್ನು ಶೇರ್ ಮಾಡಬೇಕು ಎಂದು ಕೋರುತ್ತೇನೆ. ಇಂತಹ ಹೊಸ ಹೊಸ ಪ್ರಯೋಗ ಮತ್ತು ಪ್ರಯತ್ನಗಳಿಂದ ಮಾತ್ರ ನಾವು ನಮ್ಮ ಜಿಲ್ಲೆಯ ವಿಶೇಷತೆಯನ್ನು ಬೇರೆಯವರಿಗೆ ಹೇಳಲು ಮತ್ತು ನಮ್ಮ ಜಿಲ್ಲೆಯ ವಿಶೇಷತೆಯನ್ನು ಕಾಪಾಡಲು ಸಾಧ್ಯವಾಗುತ್ತದೆ ಎಂಬುದು ನಮ್ಮ ತಿಳಿವಳಿಕೆಯಾಗಿದೆ ಎಂದರು.ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆಯಿಂದ ನಡೆದ ಈ ಉತ್ಸವದ ಯಶಸ್ಸಿಗೆ 18 ಸಮಿತಿಗಳಲ್ಲಿನ ಅಧಿಕಾರಿಗಳು ಶ್ರಮಿಸಿದ್ದಾರೆ. ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಅವರು ನೋಡಲ್ ಅಧಿಕಾರಿಯಾಗಿ, ಗಂಗಾವತಿಯ ತಹಸೀಲ್ದಾರ ನಾಗರಾಜ, ತಾಲೂಕು ಪಂಚಾಯತ್ ಇಓ ಲಕ್ಷ್ಮಿ?ಮದೇವಿ ಅವರು ಉತ್ಸವದಲ್ಲಿ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಕಂದಾಯ, ಕೃಷಿ, ತೋಟಗಾರಿಕೆ, ಆಹಾರ ಇಲಾಖೆ, ಕ್ರೀಡಾ ಇಲಾಖೆ, ವಾರ್ತಾ ಇಲಾಖೆ, ಆರೋಗ್ಯ ಇಲಾಖೆ, ಉದ್ಯೋಗ ಇಲಾಖೆ, ಕಾರ್ಮಿಕ ಇಲಾಖೆ ಸೇರಿದಂತೆ ಇನ್ನೂ ಅನೇಕ ಇಲಾಖೆಯ ಅಧಿಕಾರಿಗಳು ಶ್ರಮಿಸಿದ್ದಾರೆ ಎಲ್ಲರಿಗೂ ಅಭಿನಂದನೆ ತಿಳಿಸುವೆ ಎಂದರು.

ಜಿಲ್ಲಾಡಳಿತ ಪ್ರೀತಿಯ ಆಹ್ವಾನದಂತೆ ಕಾರ್ಯಕ್ರಮಕ್ಕೆ ಆಗಮಿಸಿ ಕಾರ್ಯಕ್ರಮ ನೀಡಿದ ಎಲ್ಲ ಕಲಾವಿದರಿಗೆ, ಕವಿಗಳು, ಸಾಹಿತಿಗಳು, ವಾರಕ್ಕೂ ಹೆಚ್ಚು ಕಾಲ ನಿರಂತರ ಸುದ್ದಿ ಮಾಡಿ ಲೇಖನ ಬರೆದು ಪ್ರಚಾರ ನೀಡಿದ ಮಾಧ್ಯಮ ಪ್ರತಿನಿಧಿಗಳಿಗೆ ವಿಶೇಷವಾದ ಅಭಿನಂದನೆ ತಿಳಿಸುವೆ ಎಂದರು.

ಕಾರ್ಯಕ್ರಮಕ್ಕೆ ಸೂಕ್ತ ಭದ್ರತೆ ನೀಡಿದ ಪೊಲೀಸ್ ಇಲಾಖೆಯ ಅಧಿಕಾರಿ ಸಿಬ್ಬಂದಿ ಶ್ರಮವು ಶ್ಲಾಘನೀಯವಾಗಿದೆ. ಎರಡು ದಿನಗಳ ಕಾಲ ಹೆಚ್ಚಿನ ಸಂಖ್ಯೆಯಲ್ಲಿ ಉತ್ಸವದ ಕಾರ್ಯಕ್ರಮಕ್ಕೆ ಬಂದು ಕಾರ್ಯಕ್ರಮ ಯಶಸ್ವಿಗೊಳಿಸಿದ ಜಿಲ್ಲೆಯ ಜನತೆಗೆ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ಅಭಿನಂದನೆ ತಿಳಿಸುವೆ ಎಂದು ತಿಳಿಸಿದರು.

ಆನೆಗೊಂದಿ ಉತ್ಸವದ ವೇದಿಕೆ ಪರಿಕಲ್ಪನೆ ಅದ್ಭುತ: ಯಶೋಧಾ ವಂಟಗೋಡಿ

ಕೊಪ್ಪಳ ಮಾರ್ಚ್ : ಐತಿಹಾಸಿಕ ಆನೆಗೊಂದಿ ಉತ್ಸವ-2024ರ ವೇದಿಕೆಯ ಪರಿಕಲ್ಪನೆಯು ಅಭಿನಂದನಾರ್ಹ ಸಂಗತಿಯಾಗಿದೆ. ಮಾನ್ಯ ಶಾಸಕರು ಮುಂದೆ ನಿಂತು ಇತಿಹಾಸ ಹಿನ್ನೆಲೆಯ ವೇದಿಕೆಯನ್ನು ನಿರ್ಮಿಸಲು ಶ್ರಮಿಸಿರುವುದು ಶ್ಲಾಘನೀಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಟೀಮ್ ವರ್ಕ್ಗೆ ಉತ್ತಮ ಉದಾಹರಣೆಯು ಆನೆಗೊಂದಿ ಉತ್ಸವವಾಗಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಪರಿಶ್ರಮದಿಂದ ಉತ್ಸವ ಯಶಸ್ವಿ ಸಾಧ್ಯವಾಗಿದೆ ಎಂದು ತಿಳಿಸಿದರು.

ಕೊಪ್ಪಳ ಜಿಲ್ಲೆಯು ಅಕ್ಷರಶಃ ಆಕರ್ಷಣೀಯ ತಾಣ: ರಾಹುಲ್ ರತ್ನಂ ಪಾಂಡೆಯ

ಕೊಪ್ಪಳ ಮಾರ್ಚ್: ಹಲವಾರು ಐತಿಹಾಸಿಕ ಮತ್ತು ಪ್ರಸಿದ್ಧ ಧಾರ್ಮಿಕ ತಾಣಗಳನ್ನು ಹೊಂದಿರುವ ಕೊಪ್ಪಳ ಜಿಲ್ಲೆಯು ವಿಶೇಷ ಆಕರ್ಷಣೀಯ ಕೇಂದ್ರವಾಗಿ ಎಲ್ಲರ ಜನಮನ ಸೆಳೆಯುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಮಹತ್ವದ್ದು ಏನು ಇಲ್ಲ ಎಂದು ಕೆಲವರು ಹೇಳುತ್ತಾರೆ. ಹಾಗೆ ಹೇಳುವವರು ಒಮ್ಮೆ ಕೊಪ್ಪಳ ಜಿಲ್ಲೆಗೆ ಬಂದು ಸುತ್ತಿದಾಗ ಅವರ ಅಭಿಪ್ರಾಯ ಬದಲಾಗುತ್ತದೆ. ಕೊಪ್ಪಳ ಜಿಲ್ಲೆಯು ಅವರ ನೆಚ್ಚಿನ ತಾಣಗಳಲ್ಲಿ ಒಂದಾಗುವುದರಲ್ಲಿ ಅನುಮಾನವೇ ಇಲ್ಲ. ಹಾಗೆ ಕೊಪ್ಪಳ ಜಿಲ್ಲೆಯು ವಿಶೇಷ ಐತಿಹ್ಯ ಹೊಂದಿದ ಪ್ರದೇಶವಾಗಿದೆ ಎಂದು ತಿಳಿಸಿದರು.

ಆನೆಗೊಂದಿ ಉತ್ಸವ ಸಮಾರೋಪ ಸಮಾರಂಭ

ಇನ್ಮುಂದೆ ಪ್ರತಿ ವರ್ಷವೂ ಆನೆಗೊಂದಿ ಉತ್ಸವ : ಜಿ.ಜನಾರ್ಧನ ರೆಡ್ಡಿ

ಕೊಪ್ಪಳ ಮಾರ್ಚ್ : ಹಂಪಿ ಉತ್ಸವದಂತೆ ಇನ್ಮುಂದೆ ಪ್ರತಿವರ್ಷವೂ ಆನೆಗೊಂದಿ ಉತ್ಸವ ಆಚರಣೆಗೆ ಕ್ರಮಕೈಗೊಳ್ಳಲಾಗುವುದು ಎಂದು ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಹೇಳಿದರು.ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರ ಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಆನೆಗೊಂದಿ ಉತ್ಸವವನ್ನು 2024ರ ಜನವರಿಯಲ್ಲಿ ಆಚರಿಸಬೇಕು ಎಂದು ಯೋಜಿಸಲಾಗಿತ್ತು. ಆದರೆ, ರಾಜ್ಯಾದ್ಯಂತ ಆವರಿಸಿದ್ದ ಬರ ಹಿನ್ನೆಲೆಯಲ್ಲಿ ಯೋಜನೆಯನ್ನು ಕೈಬಿಡಲಾಯಿತು. ಮೈಸೂರು ದಸರಾ ಹಾಗೂ ಹಂಪಿ ಉತ್ಸವದಷ್ಟೇ ವಿಜಯನಗರ ಸಾಮ್ರಾಜ್ಯದ ಮೊದಲ ರಾಜಧಾನಿ ಆನೆಗೊಂದಿ ಉತ್ಸವಕ್ಕೂ ಕೂಡ ಅಷ್ಟೇ ಮಹತ್ವ ಇದೆ ಎಂದು ಅರಿತು ನಾವು ಉತ್ಸವ ಮಾಡುತ್ತಿದ್ದೇವೆ ಎಂದು ತಿಳಿಸಿದರು.ಆನೆಗೊಂದಿ ಉತ್ಸವ ಮಾಡಲೇಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಸಲಹೆ ಮಾಡಿದರು. ಅದರಂತೆ ಕನಕಗಿರಿ ಉತ್ಸವ ಮುಗಿದ ಕೂಡಲೇ ಆನೆಗೊಂದಿ ಉತ್ಸವದ ದಿನಾಂಕ ನಿಗದಿಪಡಿಸಲಾಯಿತು. ಸಮಯದ ಅವಕಾಶ ಕಡಿಮೆ ಇದ್ದರು ಸಹ ಅಚ್ಚುಕಟ್ಟಾಗಿ ಉತ್ಸವಕ್ಕೆ ಏರ್ಪಾಡು ಮಾಡುವಲ್ಲಿ ಶ್ರಮವಹಿಸಿದ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಾಹುಲ್ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರಿಗೆ ಮತ್ತ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಅಭಿನಂದನೆ ತಿಳಿಸುವೆ ಎಂದರು.

ಆನೆಗೊಂದಿ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಲಾಗುತ್ತಿದೆ. ಕೆಲವು ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ನಡೆಸಿ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.ಧರ್ಮಪತ್ನಿ ಲಕ್ಷಿ?ಮ ಅರುಣಾ ಪ್ರೇರಣೆ : ತಾವು ಕೈಗೊಳ್ಳುವ ಪ್ರತಿಯೊಂದು ಕಾರ್ಯಕ್ಕು ತಮ್ಮ ಧರ್ಮಪತ್ನಿ ಲಕ್ಷಿ?ಮ ಅರುಣಾ ಅವರು ಒತ್ತಾಸೆಯಾಗಿದ್ದು, ಸದಾಕಾಲ ತಮ್ಮ ಜೊತೆಗಿದ್ದು ಪ್ರೋತ್ಸಾಹಿಸುತ್ತಾರೆ. ತಮ್ಮ ಧರ್ಮಪತ್ನಿ ಲಕ್ಷಿ?ಮ ಅರುಣಾ ತಮ್ಮ ಬೆನ್ನುಲುಬಿನಂತಿದ್ದಾರೆ ಎಂದು ಶಾಸಕರು ಇದೆ ವೇಳೆ ತಮ್ಮ ಪತ್ನಿಯ ಸಹಕಾರವನ್ನು ಸ್ಮರಿಸಿದರು.ಸಮಾರಂಭದಲ್ಲಿ ರಾಜವಂಶಸ್ಥರಾದ ಲಲಿತಾ ರಾಣಿ ಶ್ರೀ ರಂಗದೇವರಾಯುಲು, ಜಿಲ್ಲಾಧಿಕಾ ರಿಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರ ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಜವಂಶಸ್ಥರಾದ ರಾಣಿ ಚಂದ್ರಕಾಂತ ದೇವಿ ರಾಜ ಶ್ರೀ ಅಚ್ಯುತ್ ದೇವರಾಯ, ರಾಜ ಶ್ರೀರಾಮ ದೇವರಾಯ ಎಂ ತಿರುಮಲ ದೇವರಾಯ, ಶ್ರೀ ವೀರ ರಾಘವ ರಾಜು ತಂ ಎನ್ ಕೆ ರಾಮರಾಜು, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ಸ್ವಾಗತ ಕೋರಿದರು.

ಸಮಾರಂಭದಲ್ಲಿ ಕೊಪ್ಪಳ ಉಪವಿಭಾ ಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಆನೆಗೊಂದಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಕೆ.ಮಹಾದೇವಿ, ಉಪಾಧ್ಯಕ್ಷರಾದ ಪೂರ್ಣಿಮಾ, ಶಾಸಕರಾದ ಜನಾರ್ಧನ ರೆಡ್ಡಿ ಅವರ ಧರ್ಮಪತ್ನಿ ಲಕ್ಷಿ?ಮೇ ಅರುಣಾ ಸೇರಿದಂತೆ ಮುತ್ತಿತರರು ಉಪಸ್ಥಿತರಿದ್ದರು.

ಆನೆಗೊಂದಿ ಉತ್ಸವ ನಡೆಸಿದ್ದಕ್ಕೆ ಕೃತಜ್ಞತೆ ಸಲ್ಲಿಸುವೆ: ರಾಜವಂಶಸ್ಥೆ ಲಲಿತಾ ರಾಣಿ ಶ್ರೀ ರಂಗದೇವರಾಯಲು

ಕೊಪ್ಪಳ ಮಾರ್ಚ್ : ಆನೆಗೊಂದಿಯು ತನ್ನದೇ ಇತಿಹಾಸ ಮತ್ತು ಪರಂಪರೆಯನ್ನು ಹೊಂದಿದೆ. ಇಲ್ಲಿನ ಚಾರಿತ್ರಿ?ಯಕ ಮಹತ್ವವು ಜಾಗತಿಕವಾಗಿ ಪ್ರಚುರವಾಗಬೇಕಿದೆ. ಈ ನಿಟ್ಟಿನಲ್ಲಿ ಆನೆಗೊಂದಿ ಉತ್ಸವಕ್ಕೆ ಏರ್ಪಾಡು ಮಾಡಿರುವುದು ಸಂತಸದ ಸಂಗತಿಯಾಗಿದೆ ಎಂದು ರಾಜವಂಶಸ್ಥರಾದ ಲಲಿತಾ ರಾಣಿ ಶ್ರೀ ರಂಗದೇವರಾಯಲು ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಪ್ರಸಿದ್ಧ ವಿಜಯನಗರ ಸಾಮ್ರಾಜ್ಯವು ಹೊಂದಿದ ಭವ್ಯ ಪರಂಪರೆಯಷ್ಟೇ ಆನೆಗೊಂದಿ ಪ್ರದೇಶವು ಸಹ ಮಹತ್ವದ ಚಾರಿತ್ರಿ?ಯಕ ಹಿನ್ನೆಲೆಯನ್ನು ಹೊಂದಿದೆ. ಈ ಹಿನ್ನೆಲೆಯಲ್ಲಿ ಈ ಭಾಗದಲ್ಲಿ ಪ್ರತಿವರ್ಷ ಆನೆಗೊಂದಿ ಉತ್ಸವ ನಡೆಯಬೇಕು. ಈ ನಿಟ್ಟಿನಲ್ಲಿ ಶಾಸಕರು ಉತ್ಸವ ನಡೆಸಲು ಉತ್ಸುಕರಾಗಿರುವುದಕ್ಕೆ ತಮಗೆ ವಿಶ್ವಾಸವಿದೆ ಎಂದು ತಿಳಿಸಿದರು.

ಇಂದು ಗ್ರಾಹಕ ವ್ಯಾಜ್ಯಗಳ ಕುರಿತು ಫೋನ್ ಇನ್ ಕಾರ್ಯಕ್ರಮ

ಬೆಳಗಾವಿ: “ವಿಶ್ವ ಗ್ರಾಹಕ ಹಕ್ಕುಗಳ ದಿನ”ದ ಅಂಗವಾಗಿ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ 90.8 ಎಫ್ ಎಂ ಅಲ್ಲಿ ಗ್ರಾಹಕರ ಹಿತರಕ್ಷಣೆ, ವಸ್ತುಗಳ ಖರೀದಿಯಲ್ಲಿ ಮೋಸ, ಆನ್ ಲೈನ್ ವಂಚನೆ, ನಗದಿತ ಹಣಕ್ಕಿಂತ ಹೆಚ್ಚಿನ ಹಣ ಪಡೆಯುವಿಕೆ ಹೀಗೆ ಅನೇಕ ವಿಳಯಗಳ ಕುರಿತು ಫೋನ್ ಇನ್ ಕಾರ್ಯಕ್ರಮವನ್ನು ಗುರುವಾರ ದಿನಾಂಕ 14 ರಂದು ಮದ್ಯಾಹ್ನ 3.00ಗಂಟೆಗೆ ಆಯೋಜಿಸಲಾಗಿದೆ. ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ವೇದಿಕೆಯ ಸದಸ್ಯರಾದ ಶ್ರೀಮತಿ ಸುನಂದಾ ಕಾದ್ರೋಳಿಮಠ, ಶ್ರೀ ಗಿರೀಶ್ ಪಾಟೀಲ್ ಭಾಗವಹಿಸಿ ಕೇಳುಗರ ಸಮಸ್ಯೆಗಳಿಗೆ ಪರಿಹಾರ ನೀಡಲಿದ್ದಾರೆ. ಗ್ರಾಹಕರು ದೂರವಾಣಿ ಸಂಖ್ಯೆ 70-90-908-908 ಗೆ ಕರೆ ಮಾಡಿ ತಮ್ಮ ಸಮಸ್ಯೆ ಪರಿಹರಿಸಿಕೊಳ್ಳಬೇಕೆಂದು ಸಂಯೋಜಕರು,ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಡಿ ಮತ್ತು ನದಿಗಳ ಸಂರರಕ್ಷಣಾ ಆಯೋಗದ ಸಭೆ

ಗಡಿ ಸಮಸ್ಯೆ-ಅಹವಾಲು ಸ್ವೀಕರಿಸಲು ಸುವರ್ಣ ಸೌಧದಲ್ಲಿ ಗಡಿ ಆಯೋಗದ ಕಚೇರಿ ಸ್ಥಾಪನೆ: ಶಿವರಾಜ್ ಪಾಟೀಲ

(1 ನೇ ಪುಟದಿಂದ)

ನಿರಂತರವಾಗಿ ನಡೆದಿರುತ್ತವೆ. ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಪಟ್ಟಿಯಾದ ಬಳಿಕ ಸಮರ್ಥವಾಗಿ ವಾದ ಮಂಡನೆಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕಾನೂನಾತ್ಮಕ ಹಾಗೂ ರಾಜಕೀಯವಾಗಿ ಹೋರಾಟಕ್ಕೆ ಸಂಬಂಧಿಸಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳ ಸಲಹೆಗಳು ಮತ್ತು ಹಕ್ಕೊತ್ತಾಯಗಳನ್ನು ಸರಕಾರದ ಗಮನಕ್ಕೆ ತರುವ ಮೂಲಕ ರಚನಾತ್ಮಕ ಕಾರ್ಯಗಳನ್ನು ಹಮ್ಮಿಕೊಳ್ಳಲಾಗುವುದು. ಮಹಾರಾಷ್ಟ ಮಾದರಿಯಲ್ಲಿ ಗಡಿ ಸಚಿವರನ್ನು ನೇಮಕ ಮಾಡುವ ಬಗ್ಗೆ ಸರಕಾರದ ಗಮನಸೆಳೆಯಲಾಗುವುದು ಎಂದು ಶಿವರಾಜ್ ಪಾಟೀಲ ಭರವಸೆಯನ್ನು ನೀಡಿದರು.

ನಮ್ಮೆಲ್ಲರ ಉದ್ದೇಶ ಒಂದೇ; ಭಾವನೇ ಹಾಗೂ ಮಾಡಬೇಕಾದ ಕೆಲಸವೂ ಒಂದೇ ಆಗಿರುವುದರಿಂದ ಎಲ್ಲರೂ ಸೇರಿಕೊಂಡು ಸರಿಯಾದ ದಿಸೆಯಲ್ಲಿ ಕೆಲಸ ಮಾಡೋಣ. ಸಮಸ್ಯೆ ಹೊಸದಲ್ಲ; ವಿಳಂಬವೇ ದೊಡ್ಡ ಸಮಸ್ಯೆಯಾಗಿದೆ. ಕನ್ನಡಪರ ಸಂಘಟನೆಗಳ ಸಲಹೆಗಳ ಆಧಾರದ ಮೇಲೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು. ನದಿಗಳು ಮತ್ತು ಗಡಿಗಳ ಸಮಸ್ಯೆ ಎದುರಾದಾಗ ಕಾನೂನಾತ್ಮಕವಾಗಿ ಯಾವ ರೀತಿಯಲ್ಲಿ ರಕ್ಷಣೆ ಮಾಡಬೇಕು ಎಂಬುದನ್ನು ಸರಕಾರಕ್ಕೆ ಸಲಹೆ ರೂಪದಲ್ಲಿ ವರದಿ ನೀಡುವ ಕೆಲಸವನ್ನು ಆಯೋಗ ಮಾಡಲಿದೆ ಎಂದು ತಿಳಿಸಿದರು. ಯಾವುದೇ ಕಾನೂನುಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುವಲ್ಲಿ ಅಧಿಕಾರಿಗಳ ಪಾತ್ರ ಅತೀ ಮಹತ್ವದಾಗಿದ್ದು ಅದರಂತೆ ಬೆಳಗಾವಿಯಲ್ಲಿ ಜಿಲ್ಲಾಧಿಕಾರಿಗಳು ಸೇರಿದಂತೆ ಎಲ್ಲ ಅಧಿಕಾರಿಗಳು ಕನ್ನಡ ನಾಡು ನುಡಿಗೆ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿರುವುದು ಸಂತಸದ ಸಂಗತಿಯಾಗಿದೆ. ಕನ್ನಡ ರಾಜ್ಯೋತ್ಸವಕ್ಕೆ ಅನುದಾನ:ಬೆಳಗಾವಿಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ರಾಜ್ಯೋತ್ಸವವನ್ನು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಆಚರಿಸಲು ಸರಕಾರದಿಂದ ಹೆಚ್ಚಿನ ಅನುದಾನ ದೊರಕಿಸಲು ಶಿಫಾರಸ್ಸು ಮಾಡಲಾಗುವುದು ಎಂದು ಶಿವರಾಜ ಪಾಟೀಲ ತಿಳಿಸಿದರು. ಕನ್ನಡ ಪರ ಹೊರಾಟಗಾರರಾದ ಮಹದೇವ ತಳವಾರ ಮಾತನಾಡಿ, ಮಹಾತ್ಮಾ ಫುಲೆ ಆರೋಗ್ಯ ಯೋಜನೆ ಅನುಷ್ಠಾನಕ್ಕಾಗಿ ಗಡಿಭಾಗದಲ್ಲಿ ಕಚೇರಿ ಆರಂಭಿಸಿರುವಾಗ ಸರಕಾರದಿಂದ ಯಾವುದೇ ಕ್ರಮವಿಲ್ಲ; ಕನ್ನಡ ನಾಮಫಲಕ ಹಾಕಿಸಲು ಹೋರಾಟ ಆರಂಭಿಸಿದರೆ ಪ್ರಕರಣ ದಾಖಲಿಸುತ್ತಾರೆ; ಕನ್ನಡ ಮಾಧ್ಯಮಗಳ ಶಾಲೆಗಳಲ್ಲಿ ಕೊಠಡಿ ಕೊರತೆಯಿದೆ ಎಂಬುದನ್ನು ಮಹದೇವ ತಳವಾರ ಆಯೋಗದ ಅಧ್ಯಕ್ಷರ ಗಮನಸೆಳೆದರು.ಸ್ಥಳೀಯ ಕನ್ನಡಪರ, ರೈತಪರ ಸಂಘಟನೆಗಳ ಜತೆ ಚರ್ಚಿಸಿ ಗಡಿ ಆಯೋಗದ ಪುನರ್ ರಚನೆ ಮಾಡುವಂತೆ ತಳವಾರ ಒತ್ತಾಯಿಸಿದರು.ಅಶೋಕ ಚಂದರಗಿ ಅವರು ಮಾತನಾಡಿ, ಮಹಾತ್ಮಾ ಫುಲೆ ಆರೋಗ್ಯ ಯೋಜನೆಯನ್ನು ಗಡಿಭಾಗದ ಐದು ಜಿಲ್ಲೆಗಳಲ್ಲಿ ಮಹಾರಾಷ್ಟ ಸರಕಾರ ಅನುಷ್ಠಾನ ಮಾಡುತ್ತಿದೆ. ಬೆಳಗಾವಿಯಲ್ಲಿ ಸೇವಾಕೇಂದ್ರಗಳನ್ನು ಆರಂಭಿಸುವ ಮೂಲಕ ಆಟಾಟೋಪ ಹಾಗೂ ಕುತಂತ್ರಗಳನ್ನು ಮಾಡಲಾಗುತ್ತಿದೆ. ಇಷ್ಟೆಲ್ಲಾ ಬೆಳವಣಿಗೆಯಾದರೂ ಸರಕಾರ ಅಥವಾ ಆಯೋಗದ ವತಿಯಿಂದ ಯಾವುದೇ ಪ್ರತಿಕ್ರಿಯೆ ಬಾರದಿರುವುದಕ್ಕೆ ಕನ್ನಡಪರ ಹೋರಾಟಗಾರ ಅಶೋಕ ಚಂದರಗಿ ಅಸಮಾಧಾನ ವ್ಯಕ್ತಪಡಿಸಿದರು.

ಎಂ.ಇ.ಎಸ್.-ಶಿವಸೇನೆ ನಿಷೇಧಕ್ಕೆ ಒತ್ತಾಯ:ಕನ್ನಡಪರ ಸಂಘಟನೆಯ ಮತ್ತೋರ್ವ ಮುಖಂಡ ದೀಪಕ ಗುಡಗನಟ್ಟಿ ಮಾತನಾಡಿ, ಆಯೋಗದ ವತಿಯಿಂದ ಪ್ರತಿ ಮೂರು ತಿಂಗಳಿಗೊಮ್ಮೆ ನಿಯಮಿತವಾಗಿ ಸಭೆಗಳನ್ನು ನಡೆಸಿದರೆ ಗಡಿಭಾಗದ ಸಮಸ್ಯೆಗಳನ್ನು ಸರಕಾರದ ಗಮನಕ್ಕೆ ತರುವುದು ಅನುಕೂಲವಾಗುತ್ತದೆ ಎಂದು ಒತ್ತಾಯಿಸಿದರು.

ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಕೆ ಮಾಡಲು ಕ್ರಮ ಕೈಗೊಳ್ಳಬೇಕು. ಪದೇ ಪದೇ ಗಡಿಭಾಗದಲ್ಲಿ ಭಾಷಾದ್ವೇಷ ಮೂಡಿಸುತ್ತಿರುವ ಎಂ.ಇ.ಎಸ್ ಹಾಗೂ ಶಿವಸೇನೆಯನ್ನು ರಾಜ್ಯದಲ್ಲಿ ನಿಷೇಧಿಸಬೇಕು ಎಂದು ಗುಡಗನಟ್ಟಿ ಒತ್ತಾಯಿಸಿದರು.

ಶ್ರೀನಿವಾಸ್ ತಾಳೂರಕರ ಅವರು, ಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆ ಬಳಸಬೇಕು ಎಂಬ ಅಧಿಸೂಚನೆ ಹೊರಡಿಸಿರುವುದಕ್ಕೆ ಸಂತಸ ವ್ಯಕ್ತಪಡಿಸಿದ ಶ್ರೀನಿವಾಸ್ ತಾಳೂರಕರ ಅವರು, ಕನ್ನಡ ಬಳಕೆ ಕಡ್ಡಾಯವಾಗುವಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಒತ್ತಾಯಿಸಿದರು.ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಮಂಗಲಾ ಮೆಟಗುಡ್ ಅವರು, ಗಡಿಭಾಗದ ಅಂಗನವಾಡಿ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಭಾಷೆ ಬಲ್ಲ ಶಿಕ್ಷಕರನ್ನು ನೇಮಿಸಬೇಕು ಎಂದು ಒತ್ತಾಯಿಸಿದರು.ಸಭೆಯಲ್ಲಿ ಆಯೋಗದ ಸದಸ್ಯರುಗಳಾದ ಜಿನದತ್ತ ದೇಸಾಯಿ, ಎಸ್.ಎಂ.ಕುಲಕರ್ಣಿ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿ.ಪಂ. ಸಿ.ಇ.ಓ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಡಿ.ಸಿ.ಪಿ. ರೋಹನ್ ಜಗದೀಶ್, ಮಹಾನಗರ ಪಾಲಿಕೆಯ ಆಯುಕ್ತರಾದ ಪಿ.ಎನ್.ಲೋಕೇಶ್, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಸೇರಿದಂತೆ ವಿವಿಧ ಕನ್ನಡಪರ ಸಂಘನೆಗಳ ಪದಾಧಿಕಾರಿಗಳು, ವಿವಿಧ ಕನ್ನಡ ಪರ ಹೋರಾಟಗಾರರು ಉಪಸ್ಥಿತರಿದ್ದರು.

ಎಂಇಎಸ್ ನಾಡ ದ್ರೋಹಿ ಶುಭಂ ಶಳಕೆ ಅರೆಸ್ಟ್

ಬೆಳಗಾವಿ.ಪುಂಡ ಎಂಇಎಸ್ ಜೈ ಮಹಾರಾಷ್ಟ್ರ ಎಂದು ಬರೆದು ಪುಂಡಾಟಿಕೆ ಮೆರೆದ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.ಎರಡು ದಿನಗಳ ಹಿಂದೆ ಉದ್ಯಮಿ ಶ್ರೀಕಾಂತ್ ದೇಸಾಯಿ ಕಾರ್ಖಾನೆ ಮೇಲೆ ಜೈ ಮಹಾರಾಷ್ಟ್ರ ಬರೆದಿದ್ದ ಎಂಇಎಸ್ ಶುಂಭ ಸೇಳ್ಕೆ ಕನ್ನಡಿಗರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದ, ಬೆಳಗಾವಿಯಲ್ಲಿ ನಡೆದ ಕುಸ್ತಿ ಅಖಾಡದಲ್ಲಿ ಜೈ ಮಹಾರಾಷ್ಟ್ರ ಅಂದಿದ್ದ ಕುಸ್ತಿ ಪಟುವಿಗೆ ವೇಳೆ ಬುದ್ದಿವಾದ ಹೇಳಿ ಜೈ ಕರ್ನಾಟಕ ಹೇಳುವಂತೆ ಶ್ರೀಕಾಂತ್ ಸಲಹೆ ನೀಡಿದ್ದರು.ಇದನ್ನ ವಿರೋಧಿಸಿ ಉದ್ಯಮಿ ಕಾರ್ಖಾನೆ ಮೇಲೆ ದಾಳಿ ನಡೆಸಿ ಫ್ಲೆಕ್ಸ್ ಹರಿದು, ಜೈ ಮಹಾ ರಾಷ್ಟ್ರ ಗೋಡೆ ಬರಹ ಬರೆದಿದ್ದ ಪುಂಡ ಎಂಇಎಸ್ ಮುಖಂಡು, ಇತ್ತ ಭಾಷಾ ವೈಷಮ್ಯ ಭಿತ್ತುವ ನಿಟ್ಟಿನಲ್ಲಿ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದ ಶುಭಂ ಸೇಳ್ಕೆ ಹೇಳಿಕೆ ನೀಡಿದ್ದ. ಶುಭಂ ಸೇಳ್ಕೆ ಸೇರಿ ಮೂವರನ್ನು ಬಂಧಿಸುವಂತೆ ಡಿಸಿಪಿ ರೋಹನ್ ಜಗದೀಶ್ ಮಾಳಮಾರುತಿ ಪೊಲೀಸರಿಗೆ ಸೂಚನೆ ನೀಡಿದ ಮೇಲೆ ಮೂವರನ್ನು ಬಂಧಿಸಿಲಾಗಿದೆ.

ಜಿಮ್ಸನಲ್ಲಿ ಸಿಟಿ ಸ್ಕ್ಯಾನ್ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಟ್ಯಾಬ್ ವಿತರಿಸಿದ ಸಚಿವ ಎಚ್.ಕೆ.ಪಾಟೀಲ

(1 ನೇ ಪುಟದಿಂದ)

ಸಂಸ್ಥೆಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ನೀಡಲು ಸರ್ಕಾರ ಸದಾ ಸಿದ್ಧ. ಆಸ್ಪತ್ರೆಗಳಲ್ಲಿ ಆಗಮಿಸುವ ಜನಸಾಮಾನ್ಯರಿಗೆ ಉತ್ತಮ ಚಿಕಿತ್ಸೆ ನೀಡುವುದು ಇಲ್ಲಿನ ಅಧಿಕಾರಿ ನೌಕರರ ಆದ್ಯ ಕರ್ತವ್ಯವಾಗಬೇಕೆಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್.ಪಾಟೀಲ, ಗಣ್ಯರಾದ ಗುರಣ್ಣ ಬಳಗಾನೂರ, ಪ್ರಭು ಬುರಬುರೆ, ಎಸ್ ಎನ್.ಬಳ್ಳಾರಿ, ಡಾ. ನಾಗನೂರ, ಗದಗ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಸಿ.ಕರಿಗೌಡರ ಸೇರಿದಂತೆ ಇತರರು ಇದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26